# ಶ್ರೀ ರಾಮಕೃಷ್ಣ ಸೊಸೈಟಿ ಲಿ., ಮಂಗಳೂರು,

# 25ನೇ ವಾರ್ಷಿಕ ಮಹಾಸಭೆ

## ಲಾಭ ರೂ.5.78 ಕೋಟಿ, ಶೇ. 25 ಡಿವಿಡೆಂಟ್




ಶ್ರೀ ರಾಮಕೃಷ್ಣ ಕ್ರೆಡಿಟ್ ಕೋ–ಓಪರೇಟಿವ್ ಸೊಸೈಟಿಯ 25ನೇ ವಾರ್ಷಿಕ ಮಹಾಸಭೆ ಸಂಘದ ಅಧ್ಯಕ್ಷರಾದ ಶ್ರೀ ಕೆ. ಜೈರಾಜ್ ಬಿ. ರೈ ಯವರ ಅಧ್ಯಕ್ಷತೆಯಲ್ಲಿ ಮಂಗಳೂರಿನ ಉರ್ವ ಸೆಂಟನರಿ ಚರ್ಚ್ ಹಾಲ್ ನಲ್ಲಿ ದಿನಾಂಕ 01.09.2019 ರಂದು ಜರಗಿತು.

ಸಂಘವು 1994 ರಂದು ಸ್ಥಾಪನೆಗೊಂಡು ಇದೀಗ ಸದಸ್ಯರ ಸೇವೆಯಲ್ಲಿ ಯಶಸ್ವಿ 25ನೇ ವರ್ಷ ಪೂರೈಸಿದ್ದು ಬೆಳ್ಳಿ ಹಬ್ಬದ ಸಡಗರದಲ್ಲಿದೆ. ಸಂಘವು 31.03.2019ಕ್ಕೆ ಅಂತ್ಯವಾದ 2018-19ನೇ ಸಾಲಿನಲ್ಲಿ ರೂ.193 ಕೋಟಿ ಠೇವಣಾತಿ, ರೂ. 158 ಕೋಟಿ ಹೊರಬಾಕಿ ಸಾಲದೊಂದಿಗೆ ಒಟ್ಟು ವ್ಯವಹಾರ ರೂ. 352 ಕೋಟಿ ತಲುಪಿದೆ. ಹಿಂದಿನ ಸಾಲಿಗೆ ಹೋಲಿಸುವಾಗ ಠೇವಣಾತಿಯಲ್ಲಿ ಶೇ. 21% ಹಾಗೂ ಸಾಲ ನೀಡುವಿಕೆಯಲ್ಲಿ ಶೇ.24% ಪ್ರಗತಿಯನ್ನು ಸಾಧಿಸಿದೆ. ನಿವ್ವಳ ಅನುತ್ಪಾದಕ ಆಸ್ತಿಯು ಶೂನ್ಯ ಪ್ರಮಾಣದಲ್ಲಿದ್ದು, ರೂ.5.78 ಕೋಟಿ ನಿವ್ವಳ ಲಾಭ ಗಳಿಸಿದ್ದು, ಲಾಭ ವಿಂಗಡಣೆಯಲ್ಲಿ ಸದಸ್ಯರಿಗೆ ಶೇ. 25 ಡಿವಿಡೆಂಟ್‌ನ್ನು ನೀಡಲು ಮಹಾಸಭೆಯು ನಿರ್ಧರಿಸಿದೆ.

2017-18ನೇ ಸಾಲಿನ ಸಂಘದ ಅಮೂಲಾಗ್ರ ಪ್ರಗತಿಯನ್ನು ಪರಿಗಣಿಸಿ ಎಸ್.ಸಿ.ಡಿ.ಸಿ.ಸಿ. ಬ್ಯಾಂಕ್ ನೀಡುವ ಸಾಧನಾ ಪ್ರಶಸ್ತಿ ಸಂಘಕ್ಕೆ ಲಭಿಸಿದೆ ಎಂದು ಸಂಘದ ಅಧ್ಯಕ್ಷರಾದ ಶ್ರೀ ಕೆ. ಜೈರಾಜ್ ಬಿ. ರೈ ರವರು ಸಭೆಗೆ ತಿಳಿಸಿದರು.

ಎಸ್.ಸಿ.ಡಿ.ಸಿ.ಸಿ. ಬ್ಯಾಂಕ್‌ನ ನಿರ್ದೇಶಕರಾಗಿ ಆಯ್ಕೆಯಾದ ಸಂಘದ ಅಧ್ಯಕ್ಷರಾದ ಶ್ರೀ ಕೆ. ಜೈರಾಜ್ ಬಿ ರೈ ಯವರನ್ನು ಮತ್ತು ದ.ಕ.ಜಿಲ್ಲಾ ಸಹಕಾರಿ ಯೂನಿಯನ್‌ಗೆ ಅಧ್ಯಕ್ಷರಾಗಿ ಆಯ್ಕೆಯಾದ ಸಂಘದ ನಿರ್ದೇಶಕರಾದ ಬೆಳ್ಳಿಪಾಡಿ ಪ್ರಸಾದ್ ಕೌಶಲ್ ಶೆಟ್ಟಿಯವರನ್ನು ಮಹಾಸಭೆಯಲ್ಲಿ ಸನ್ಮಾನಿಸಲಾಯಿತು.

ಪ್ರಭಾರ ಮಹಾಪ್ರಬಂಧಕ ಶ್ರೀ ಗಣೇಶ್ ಜಿ.ಕೆ. ಲೆಕ್ಕಪರಿಶೋಧಿತ ಆರ್ಥಿಕ ತಖ್ತೆ, ಲಾಭ ವಿಂಗಡಣೆ, ಬಜೆಟ್, ಬೈಲಾ ತಿದ್ದುಪಡಿ ಪ್ರಸ್ತಾವನೆಗಳನ್ನು ಮಂಡಿಸಿದರು. 2018-19 ಸಾಲಿನಲ್ಲಿ ನಿಗದಿತ ಗುರಿಯನ್ನು ಸಾಧಿಸಿ ಅತ್ಯುತ್ತಮ ಕಾರ್ಯನಿರ್ವಹಣೆ ತೋರಿದ ಶಾಖೆಗಳನ್ನು ಅಭಿನಂದಿಸಲಾಯಿತು. 2018-19 ಸಾಲಿನಲ್ಲಿ ಎಸ್.ಎಸ್.ಎಲ್.ಸಿ

ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಸಿಬ್ಬಂದಿಗಳ ಮಕ್ಕಳಾದ ಕುಮಾರಿ ಲಿಪಿ ಹೆಗ್ಡೆ, ಮಾಸ್ಟರ್ ಅನ್ಮ ಶೆಟ್ಟಿ ಮತ್ತು ಕುಮಾರಿ ರಕ್ಷಾ ಎಂ ಶೆಟ್ಟಿ ಯವರಿಗೆ, ಸ್ಥಾಪಕಾಧ್ಯಕ್ಷ ದಿ| ಕೆ.ಬಿ. ಜಯಪಾಲ ಶೆಟ್ಟಿ ಸ್ಮರಣಾರ್ಥ ಪ್ರತಿಭಾ ಪುರಸ್ಕಾರವನ್ನು ನೀಡಿ ಸನ್ಮಾನಿಸಲಾಯಿತು.

ಸಂಘದ ಉಪಾಧ್ಯಕ್ಷೆ ಶ್ರೀಮತಿ ಲಕ್ಷ್ಮಿ ಜಯಪಾಲ ಶೆಟ್ಟಿ ಹಾಗೂ ನಿರ್ದೇಶಕರಾದ ಶ್ರೀಮತಿ ಎ. ರತ್ನಕಾಂತಿ ಶೆಟ್ಟಿ, ಡಾ| ಕೆ. ಸುಭಾಶ್ಚಂದ್ರ ಶೆಟ್ಟಿ, ಶ್ರೀ ಪಿ.ಎಸ್. ಅಡ್ಯಂತಾಯ, ಶ್ರೀ ಸಿಎ ಹೆಚ್.ಆರ್ ಶೆಟ್ಟಿ, ಶ್ರೀ ಯಂ. ರಾಮಯ ಶೆಟ್ಟಿ, ಶ್ರೀ ಅರುಣ್ ಕುಮಾರ್ ಶೆಟ್ಟಿ, ಶ್ರೀ ಪಿ.ಬಿ. ದಿವಾಕರ ರೈ , ಶ್ರೀ ರವೀಂದ್ರನಾಥ ಜಿ. ಹೆಗ್ಡೆ, ಶ್ರೀ ಬಿ. ದಯಾಕರ್ ಆಳ್ವ, ಡಾ| ಎಂ. ಸುಧಾಕರ ಶೆಟ್ಟಿ ಉಪಸ್ಥಿತರಿದ್ದರು.

ನಿರ್ದೇಶಕರಾದ ಶ್ರೀ ಕೆ. ಸೀತಾರಾಮ ರೈ ಸವಣೂರು ಸ್ವಾಗತಿಸಿದರು, ಶ್ರೀ ಯಂ. ರಾಮಯ್ಯ ಶೆಟ್ಟಿ ವಂದಿಸಿದರು, ಸಿಬ್ಬಂದಿಗಳಾದ ಶ್ರೀ ಮೋಹನ್‌ದಾಸ್ ಶೆಟ್ಟಿ, ಶ್ರೀ ಚಂದ್ರಹಾಸ ಶೆಟ್ಟಿ ಮತ್ತು ಕುಮಾರಿ ಅಶ್ವಿತ ಎಂ ಕಾರ್ಯಕ್ರಮ ನಿರೂಪಿಸಿದರು.